ವಿಜಯವಾಣಿ
ಕನ್ನಡಿಗರ ಧ್ವನಿ

**Monday 02nd October 2023, Page No.10**

## RV Inauguration Ceremony of First Year BE Students 2023-2024 Batch

ವಿಜಯವಾಣಿ ನಂ 1

# ಎನ್‌ಇಪಿ ಜಾರಿಯಿಂದ ಸಶಕ್ತವಾಗಲಿದೆ ಭಾರತ

## ಪ್ರೊ. ಸೀತಾರಾಮ್ ಅಭಿಮತ | ಆರ್.ವಿ. ತಾಂತ್ರಿಕ ಕಾಲೇಜಿನಲ್ಲಿ ತರಗತಿಗೆ ಚಾಲನೆ

**ಯಶವಂತಪುರ:** ನೂತನ ರಾಷ್ಟ್ರೀಯ ಶಿಕ್ಷಣ ನೀತಿ (ಎನ್‌ಇಪಿ) ಜಾರಿಯಿಂದಾಗಿ ಶೈಕ್ಷಣಿಕ ಕ್ಷೇತ್ರದಲ್ಲಿ ಅಮೂಲಾಗ್ರ ಬದಲಾವಣೆಯೊಂದಿಗೆ ಮುಂಬರುವ ದಿನಗಳಲ್ಲಿ ತಂತ್ರಜ್ಞಾನ ಕ್ಷೇತ್ರದಲ್ಲಿ ಗಣನೀಯ ಸಾಧನೆ ಮಾಡುವ ಮೂಲಕ ಸಶಕ್ತ ರಾಷ್ಟ್ರವಾಗಿ ಭಾರತ ಹೊರಹೊಮ್ಮಲಿದೆ ಎಂದು ನವದೆಹಲಿಯ ಅಖಿಲ ಭಾರತ ತಾಂತ್ರಿಕ ಶಿಕ್ಷಣ ಮಂಡಳಿಯ ಅಧ್ಯಕ್ಷ ಪ್ರೊ.ಟಿ.ಜಿ. ಸೀತಾರಾಮ್ ಹೇಳಿದ್ದಾರೆ.

ಆರ್.ವಿ. ತಾಂತ್ರಿಕ ಮಹಾವಿದ್ಯಾಲಯ ವತಿಯಿಂದ ಆಯೋಜಿಸಿದ್ದ 'ಪ್ರಥಮ ವರ್ಷದ ಬಿಇ 2023-24ನೇ ಸಾಲಿನ ತರಗತಿಗಳ ಉದ್ಘಾಟನಾ ಸಮಾರಂಭ'ದಲ್ಲಿ ಮಾತನಾಡಿದರು. ಬಿಇ ಮತ್ತು ಡಿಪ್ಲೊಮಾ ವಿದ್ಯಾರ್ಥಿಗಳಿಗೆ ಪ್ರಾದೇಶಿಕ ಭಾಷೆಯಲ್ಲಿ ಪಠ್ಯಕ್ರಮ ದೊರಕುವ ಪರಿಣಾಮದಿಂದ ೨ ಸರಳವಾಗಿ ಅರ್ಥೈಸಿಕೊಂಡು ಜ್ಞಾನದ ಅರಿವು ಹೆಚ್ಚಿಸಿಕೊಳ್ಳಲು ಸಹಕಾರಿಯಾಗಿದೆ ಎಂದರು. ವಿದ್ಯಾರ್ಥಿಗಳು ಎಷ್ಟೇ ಸಾಧನೆ ಮಾಡಿದರೂ ಮಾನವೀಯತೆ ಮೈಗೂಡಿಸಿಕೊಂಡು ಸಮಾಜದ ಅಭ್ಯುದಯಕ್ಕೆ ಶ್ರಮಿಸಬೇಕೆಂದು ಕಿವಿಮಾತು ಹೇಳಿದರು.

ಕಾಲೇಜಿನಲ್ಲಿ ವ್ಯಾಸಂಗ ನಡೆಸಿ ಉನ್ನತ ಹುದ್ದೆ ಅಲಂಕರಿಸಿದವರನ್ನು ಗೌರವಿಸಲಾಯಿತು. ಆಡಳಿತ ಮಂಡಳಿ ಅಧ್ಯಕ್ಷ ಡಾ.ಎಂ.ಪಿ. ಶ್ಯಾಮ್, ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್‌ನ ಗೌರವ ಕಾರ್ಯದರ್ಶಿ ಡಾ. ಎ.ವಿ.ಎಸ್. ಮೂರ್ತಿ, ಪ್ರಾಂಶುಪಾಲ ಡಾ. ಕೆ.ಎನ್. ಸುಬ್ರಮಣ್ಯ, ಉಪ ಪ್ರಾಂಶುಪಾಲೆ ಡಾ. ಗೀತಾ ಸುಬ್ರಮಣ್ಯ ಇತರರಿದ್ದರು.




ಆರ್.ವಿ. ತಾಂತ್ರಿಕ ಕಾಲೇಜಿನಲ್ಲಿ ವ್ಯಾಸಂಗ ನಡೆಸಿ ಉನ್ನತ ಹುದ್ದೆ ಅಲಂಕರಿಸಿದವರನ್ನು ಪ್ರೊ. ಟಿ.ಜಿ. ಸೀತಾರಾಮ್ ಗೌರವಿಸಿದರು. ಡಾ. ಎಂ.ಪಿ. ಶ್ಯಾಮ್, ಡಾ. ಎ.ವಿ.ಎಸ್. ಮೂರ್ತಿ, ಡಾ. ಕೆ.ಎನ್. ಸುಬ್ರಮಣ್ಯ ಇತರರಿದ್ದರು.

Bengaluru Edition
Oct 2, 2023 Page No. 10
Powered by : eReleGo.com